Akashvani: Bangalore
National News In Kannada
01.11.2025 : 7.35am

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು :**

1. ಕರ್ನಾಟಕದಾದ್ಯಂತ ಇಂದು ೭೦ನೇ ರಾಜ್ಯೋತ್ಸವ ಆಚರಣೆ: ರಾಜ್ಯದ ಜನತೆಗೆ ಗಣ್ಯರಿಂದ ಶುಭಾಶಯ
2. ಛತ್ತೀಸ್‌ಗಢಕ್ಕೆ ಇಂದು ಪ್ರಧಾನಿ ಭೇಟಿ; ೧೪ ಸಾವಿರದ ೨೬೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
3. ಕೌಲಾಲಂಪುರದಲ್ಲಿಂದು ನಡೆಯಲಿರುವ ೧೨ನೇ ಆಸಿಯಾನ್ ರಕ್ಷಣಾ ಸಚಿವರ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗಿ
4. ಹೈಲೋ ಓಪನ್ ಬ್ಯಾಡ್ಮಿಂಟನ್: ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಸೆಮಿಫೈನಲ್ ಪ್ರವೇಶಿಸಿದ ಭಾರತದ ಉನ್ನತಿ ಹೂಡಾ

*******

ರಾಜ್ಯಾದ್ಯಂತ ಇಂದು ೭೦ನೇ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಗಣ್ಯರು ರಾಜ್ಯದ ಜನರಿಗೆ ಶುಭಾಶಯ ಕೋರಿದ್ದಾರೆ. ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ರಾಜ್ಯ ಮಟ್ಟದ ಕಾರ್ಯಕ್ರಮ ಇಂದು ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಗಣ್ಯರು, ಅಧಿಕಾರಿಗಳು ಭಾಗವಹಿಸಲಿದ್ದಾರೆ. ಕನ್ನಡ ರಾಜ್ಯೋತ್ಸವದ ಅಂಗವಾಗಿ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇಖಡಾ ೫೦ರಷ್ಟು ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ರಿಯಾಯಿತಿ ಸೌಲಭ್ಯ ದೊರೆಯಲಿದೆ.

*******

ರಾಜ್ಯ ರಚನೆಯ ೨೫ ವರ್ಷಗಳನ್ನು ಆಚರಿಸುವ ಕಾರ್ಯಕ್ರಮದಲ್ಲಿ  ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಇಂದು ಛತ್ತೀಸ್‌ಗಢಕ್ಕೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ಮೋದಿ ಅವರು, ೧೪ ಸಾವಿರದ ೨೬೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. 'ದಿಲ್ ಕಿ ಬಾತ್' ಉಪಕ್ರಮದ ಭಾಗವಾಗಿ ನವ ರಾಯ್‌ಪುರ ಅಟಲ್ ನಗರದ ಶ್ರೀ ಸತ್ಯ ಸಾಯಿ ಸಂಜೀವನಿ ಆಸ್ಪತ್ರೆಯಲ್ಲಿ 'ಗಿಫ್ಟ್ ಆಫ್ ಲೈಫ್' ಕಾರ್ಯಕ್ರಮದಡಿಯಲ್ಲಿ ಹೃದಯ ಕಾಯಿಲೆಗಳಿಗೆ ಯಶಸ್ವಿಯಾಗಿ ಚಿಕಿತ್ಸೆ ಪಡೆಯುತ್ತಿರುವ ಸುಮಾರು ೨ ಸಾವಿರದ ೫೦೦ ಮಕ್ಕಳೊಂದಿಗೆ ಪ್ರಧಾನಿ ಮೋದಿ ಸಂವಾದ ನಡೆಸಲಿದ್ದಾರೆ. ನಂತರ, ನವ ರಾಯ್‌ಪುರ ಅಟಲ್ ನಗರದ ಛತ್ತೀಸ್‌ಗಢ ಶಾಸಕರ ಕಚೇರಿಯ ನೂತನ ಕಟ್ಟಡದಲ್ಲಿ ಭಾರತ ರತ್ನ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪ್ರತಿಮೆಯನ್ನು ಮೋದಿ ಅನಾವರಣಗೊಳಿಸಲಿದ್ದಾರೆ.      ಬಳಿಕ

ಅವರು, ರಾಜ್ಯ ರಚನೆಯ ೨೫ ವರ್ಷಗಳನ್ನು ಆಚರಿಸುವ ಛತ್ತೀಸ್‌ಗಢ ರಜತ್ ಮಹೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಅಲ್ಲಿ ಅವರು ರಸ್ತೆಗಳು, ಕೈಗಾರಿಕೆ, ಆರೋಗ್ಯ ರಕ್ಷಣೆ ಮತ್ತು ಇಂಧನ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ೧೪ ಸಾವಿರದ ೨೬೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ಮಾಡಲಿದ್ದಾರೆ. ಗ್ರಾಮೀಣ ಜೀವನೋಪಾಯವನ್ನು ಬಲಪಡಿಸುವ ಭಾಗವಾಗಿ, ಪ್ರಧಾನಿಯವರು ಒಂಬತ್ತು ಜಿಲ್ಲೆಗಳಲ್ಲಿ ೧೨ ಹೊಸ ಸ್ಟಾರ್ಟ್-ಅಪ್ ಗ್ರಾಮ ಉದ್ಯಮಶೀಲತಾ ಬ್ಲಾಕ್‌ಗಳನ್ನು ಉದ್ಘಾಟಿಸಲಿದ್ದಾರೆ. ಅವರು ૩.೫೧ ಲಕ್ಷ ಮನೆಗಳ ಗೃಹ ಪ್ರವೇಶದಲ್ಲಿ ಭಾಗವಹಿಸಲಿದ್ದಾರೆ ಮತ್ತು ಪ್ರಧಾನ ಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ ಮೂರು ಲಕ್ಷ ಫಲಾನುಭವಿಗಳಿಗೆ ೧ ಸಾವಿರದ ೨೦೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಪಾತಲ್‌ಗಾಂವ್-ಕುಂಕುರಿಯಿಂದ ಛತ್ತೀಸ್‌ಗಢ-ಜಾರ್ಖಂಡ್ ಗಡಿಯವರೆಗೆ ನಾಲ್ಕು ಪಥಗಳ ಗ್ರೀನ್‌ಫೀಲ್ಡ್ ಹೆದ್ದಾರಿಗೆ ಅಡಿಪಾಯ ಹಾಕಲಿದ್ದಾರೆ. ಇದನ್ನು ಭಾರತ್‌ಮಾಲಾ ಪರಿಯೋಜನಾ ಅಡಿಯಲ್ಲಿ ૩ ಸಾವಿರದ ೧೫೦ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

*******

ಮಲೇಷ್ಯಾದ ಕೌಲಾಲಂಪುರದಲ್ಲಿ ಇಂದು ನಡೆಯಲಿರುವ ೧೨ನೇ ಆಸಿಯಾನ್ ರಕ್ಷಣಾ ಸಚಿವರ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗವಹಿಸಲಿದ್ದಾರೆ. ಕೌಲಾಲಂಪುರದಲ್ಲಿ ನಡೆದ ಆಸಿಯಾನ್-ಭಾರತ ರಕ್ಷಣಾ ಸಚಿವರ ಅನೌಪಚಾರಿಕ ಸಭೆಯಲ್ಲಿ ಉದ್ಘಾಟನಾ ಭಾಷಣ ಮಾಡಿದ ಸಚಿವ ರಾಜನಾಥ್ ಸಿಂಗ್, ಕಡಲ ಮಾರ್ಗಗಳನ್ನು ಸುರಕ್ಷಿತಗೊಳಿಸುವುದು ದೇಶದ ಪ್ರಮುಖ ಆದ್ಯತೆಯಾಗಿದೆ. ಭಾರತದ ಅರ್ಧಕ್ಕಿಂತ ಹೆಚ್ಚು ವ್ಯಾಪಾರ, ದಕ್ಷಿಣ ಚೀನಾ ಸಮುದ್ರ ಮತ್ತು ಮಲಕ್ಕಾ ಜಲಸಂಧಿಯ ಮೂಲಕ ಹಾದುಹೋಗುತ್ತದೆ ಎಂದು ಹೇಳಿದ್ದಾರೆ. ಭಾರತ-ಆಸಿಯಾನ್ ಒಪ್ಪಂದದ ಕೇಂದ್ರಬಿಂದು-ಕಡಲ ಭದ್ರತೆ ಎಂದು ಹೇಳಿದ ಅವರು, ಎರಡನೇ ಆವೃತ್ತಿಯ ಆಸಿಯಾನ್-ಭಾರತ ಕಡಲ ಸಮರಾಭ್ಯಾಸಕ್ಕೆ ಸಮ್ಮತಿ ಸೂಚಿಸಿರುವುದಕ್ಕೆ ಅವರು ಆಸಿಯಾನ್ ಸದಸ್ಯ ರಾಷ್ಟ್ರಗಳನ್ನು ಶ್ಲಾಘಿಸಿದ್ದಾರೆ. ಅನೇಕ ಹಳೆಯ ನಂಬಿಕೆಗಳು ಮತ್ತು ನಿರೀಕ್ಷೆಗಳು ಬದಲಾಗುತ್ತಿರುವ ಇಂದಿನ ಅನಿಶ್ಚಿತ ಜಗತ್ತಿನಲ್ಲಿ ಆಸಿಯಾನ್-ಭಾರತ ಸಂಬಂಧ ಸ್ಥಿರತೆಯ ಬಲವಾದ ಆಧಾರಸ್ತಂಭವಾಗಿ ಉಳಿದಿದೆ. ಆಸಿಯಾನ್ ಮತ್ತು ಭಾರತ ಎರಡೂ ತ್ವರಿತ ಆರ್ಥಿಕ ಬೆಳವಣಿಗೆಯನ್ನು ತೋರಿಸಿವೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು. ಆಸಿಯಾನ್ ಜೊತೆಗಿನ ವ್ಯಾಪಾರ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಆಸಿಯಾನ್-ಭಾರತ ಸರಕುಗಳಲ್ಲಿ ವ್ಯಾಪಾರ ಒಪ್ಪಂದದ ಪರಿಶೀಲನೆಯನ್ನು ಶೀಘ್ರವಾಗಿ ಪೂರ್ಣಗೊಳಿಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು. ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಮಹಿಳೆಯರಿಗಾಗಿ ಆಸಿಯಾನ್-ಭಾರತ ಉಪಕ್ರಮದ ಎರಡನೇ ಆವೃತ್ತಿಯನ್ನು ಪ್ರಸ್ತಾಪಿಸಿದ ಸಚಿವ ರಾಜನಾಥ್ ಸಿಂಗ್, ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ವಿಶ್ವಸಂಸ್ಥೆ ಹೊಂದಿದೆ ಎಂದು ಹೇಳಿದರು. ಎರಡೂ ಪ್ರದೇಶಗಳ ರಕ್ಷಣಾ ಚಿಂತಕರ ಚಾವಡಿಗಳ ನಡುವೆ ಸಾಂಸ್ಥಿಕ ತೊಡಗಿಸಿಕೊಳ್ಳುವಿಕೆಯನ್ನು ಉತ್ತೇಜಿಸಲು ಮೀಸಲಾದ ವೇದಿಕೆಯನ್ನು ಸ್ಥಾಪಿಸುವಂತೆ ಅವರು ಪ್ರಸ್ತಾಪಿಸಿದರು. ಇದು ರಕ್ಷಣೆ ಮತ್ತು ಭದ್ರತಾ ಕ್ಷೇತ್ರದಲ್ಲಿ ಭಾರತ ಮತ್ತು ಆಸಿಯಾನ್ ನಡುವಿನ ಕಾರ್ಯತಂತ್ರದ ಸಹಕಾರವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದರು. ಆಸಿಯಾನ್-ಭಾರತ ಕಡಲ ಸಮರಾಭ್ಯಾಸ- ೨೦೨೬ ಭಾರತದಲ್ಲಿ ನಡೆಯಲಿದೆ. ಇದು ನೌಕಾ ಸಹಕಾರವನ್ನು ಮತ್ತಷ್ಟು ಬಲಪಡಿಸುತ್ತವೆ,

ಪರಸ್ಪರ ಕಾರ್ಯಸಾಧ್ಯತೆಯನ್ನು ಹೆಚ್ಚಿಸುತ್ತವೆ ಹಾಗೂ ಕಡಲ ಸುರಕ್ಷತೆ, ಭದ್ರತೆ ಮತ್ತು ಸಂಚರಣೆಯ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದರು.

*******

ಭಾರತ-ಬ್ರಿಟನ್ ಸಂಬಂಧಗಳು ಸಂಕೀರ್ಣವಾದ ಐತಿಹಾಸಿಕ ಸಂಬಂಧದಿಂದ ಕ್ರಿಯಾತ್ಮಕ ಮತ್ತು ಭವಿಷ್ಯದ ಪಾಲುದಾರಿಕೆಯಾಗಿ ವಿಕಸನಗೊಂಡಿವೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಬ್ರಿಟನ್ ರಾಷ್ಟ್ರೀಯ ದಿನಾಚರಣೆ ಉದ್ದೇಶಿಸಿ ಮಾತನಾಡಿದ ಡಾ. ಜೈಶಂಕರ್, ಎರಡೂ ರಾಷ್ಟ್ರಗಳು ತಂತ್ರಜ್ಞಾನ ಭದ್ರತಾ ಉಪಕ್ರಮದ ಅಡಿಯಲ್ಲಿ ಸಹಕಾರವನ್ನು ವಿಸ್ತರಿಸಿದ್ದಲ್ಲದೆ, ಸಂಪರ್ಕ, ಕೃತಕ ಬುದ್ಧಿಮತ್ತೆ ಮತ್ತು ನಿರ್ಣಾಯಕ ಖನಿಜಗಳಿಗೆ ಸಂಬಂಧಿಸಿದಂತೆ ಸಹಕಾರ ಬಲಪಡಿಸಿವೆ ಎಂದರು. ಭಾರತದಲ್ಲಿ ಕ್ಯಾಂಪಸ್‌ಗಳನ್ನು ಸ್ಥಾಪಿಸಲು ಒಂಬತ್ತು ಪ್ರಮುಖ ಬ್ರಿಟನ್ ವಿಶ್ವವಿದ್ಯಾಲಯಗಳು ಅನುಮೋದನೆ ಪಡೆದಿವೆ ಎಂದು ಅವರು ತಿಳಿಸಿದರು.

*******

'ಸ್ವಸ್ಥ ನಾರಿ, ಸಶಕ್ತ ಪರಿವಾರ್' ಅಭಿಯಾನ ಮೂರು ಗಿನ್ನೆಸ್ ವಿಶ್ವ ದಾಖಲೆಗಳನ್ನು ನಿರ್ಮಿಸಿದೆ. ಈ ಉಪಕ್ರಮಕ್ಕೆ ಒಂದೇ ತಿಂಗಳಲ್ಲಿ ೩.೨೧ ಕೋಟಿಗೂ ಹೆಚ್ಚು ಜನರು ನೋಂದಾಯಿಸಿಕೊಂಡಿದ್ದಾರೆ. ಒಂದು ವಾರದಲ್ಲಿ ಹೆಚ್ಚಿನ ಜನರು ಸ್ತನ ಕ್ಯಾನ್ಸರ್ ತಪಾಸಣೆಗೆ ಆನ್‌ಲೈನ್‌ನಲ್ಲಿ ನೋಂದಣಿಯಾದ ದಾಖಲೆಯನ್ನು ಇದು ಸಾಧಿಸಿದೆ. ೯.೯೪ ಲಕ್ಷಕ್ಕೂ ಹೆಚ್ಚು ಮಹಿಳೆಯರು ಸ್ಕ್ರೀನಿಂಗ್‌ಗಾಗಿ ನೋಂದಣಿಯಾಗಿದ್ದಾರೆ. ಅಲ್ಲದೆ, ರಾಜ್ಯ ಮಟ್ಟದಲ್ಲಿ ಒಂದು ವಾರದಲ್ಲಿ ದಾಖಲೆಯ ೧.೨೫ ಲಕ್ಷ ಜನರು ಪ್ರಮುಖ ತಪಾಸಣೆಗಾಗಿ ನೋಂದಣಿಯಾಗಿದ್ದಾರೆ. ಕೇಂದ್ರ ಸರ್ಕಾರಿ ಸಂಸ್ಥೆಗಳು, ವೈದ್ಯಕೀಯ ಕಾಲೇಜುಗಳು ಮತ್ತು ಖಾಸಗಿ ಸಂಸ್ಥೆಗಳನ್ನು ಒಳಗೊಂಡ ಈ ಅಭಿಯಾನದಲ್ಲಿ ೨೦ ಕ್ಕೂ ಹೆಚ್ಚು ಸಚಿವಾಲಯಗಳು ಸಕ್ರಿಯವಾಗಿ ಭಾಗವಹಿಸಿವೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ಇಡೀ ಸಮಾಜದ ವಿಧಾನವನ್ನು ಅನುಸರಿಸಿ, ಸೆಪ್ಟೆಂಬರ್ ೧೭ ರಿಂದ ಈ ತಿಂಗಳ ೨ ರವರೆಗೆ ಪ್ರಾರಂಭವಾದ ಅಭಿಯಾನವು ಅಭೂತಪೂರ್ವ ಸಮುದಾಯ ಭಾಗವಹಿಸುವಿಕೆಗೆ ಸಾಕ್ಷಿಯಾಗಿದೆ. ೫ ಲಕ್ಷಕ್ಕೂ ಹೆಚ್ಚು ಪಂಚಾಯತ್ ರಾಜ್ ಪ್ರತಿನಿಧಿಗಳು, ೧.೧೪ ಕೋಟಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳು, ೯೪ ಲಕ್ಷ ಸ-ಸಹಾಯ ಗುಂಪು ಸದಸ್ಯರು ಮತ್ತು ೫ ಲಕ್ಷ ಇತರೆ ಸಮುದಾಯ ಸದಸ್ಯರು ಅಭಿಯಾನದಲ್ಲಿ ಭಾಗವಹಿಸಿದ್ದರು.

*******

ಜರ್ಮನಿಯ ಸಾರ್ಬ್ರೂಕೆನ್‌ನಲ್ಲಿ ನಡೆದ ಹೈಲೋ ಓಪನ್ ಸೂಪರ್ ೫೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ಸೆಮಿಫೈನಲ್‌ಗೆ ಭಾರತದ ಉನ್ನತಿ ಹೂಡಾ ಲಗ್ಗೆ ಇಟ್ಟಿದ್ದಾರೆ. ಕ್ವಾರ್ಟರ್ ಫೈನಲ್‌ನಲ್ಲಿ ಅವರು, ಚೈನೀಸ್ ತೈಪೆಯ ಲಿನ್ ಹ್ಸಿಯಾಂಗ್-ಟಿ ಅವರನ್ನು ೨೨-೨೦, ೨೧-೧೩ ಸೆಟ್‌ಗಳಿಂದ ಸೋಲಿಸಿದರು. ಫೈನಲ್‌ನಲ್ಲಿ ಸ್ಥಾನ ಪಡೆಯಲು ಅವರು ಈಗ ಅಗ್ರ ಶ್ರೇಯಾಂಕಿತೆ ಇಂಡೋನೇಷ್ಯಾದ ಕುಸುಮಾ ವರ್ದಾನಿ ಅವರನ್ನು ಎದುರಿಸಲಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಲಕ್ಷ್ಯ ಸೇನ್, ಆಯುಷ್ ಶೆಟ್ಟಿ ಮತ್ತು ಕಿರಣ್ ಜಾರ್ಜ್ ಕ್ರಮವಾಗಿ ತಮ್ಮ ಕ್ವಾರ್ಟರ್-ಫೈನಲ್ ಪಂದ್ಯಗಳಲ್ಲಿ ಸೋಲುವುದರೊಂದಿಗೆ ಭಾರತದ ಅಭಿಯಾನ ಕೊನೆಗೊಂಡಿತು.

****END***